All India Radio: Bangalore
Regional Bulletin In Kannada
31.03.2025 / 6.40 p.m.
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ನಾಳೆಯಿಂದ ಹಾಲು, ಮೊಸರು, ವಿದ್ಯುತ್ ಬೆಲೆ ಏರಿಕೆ ಜಾರಿ; ಬೆಂಗಳೂರು ನಿವಾಸಿಗಳಿಗೆ ತ್ಯಾಜ್ಯದ ಮೇಲೂ ತೆರಿಗೆ
- ಬೆಲೆ ಏರಿಕೆ ವಿರೋಧಿಸಿ ಏಪ್ರಿಲ್ ೨ ರಂದು ಬಿಜೆಪಿ ಅಹೋರಾತ್ರಿ ಧರಣಿ; ಭಿತ್ತಿಪತ್ರ ಬಿಡುಗಡೆ ಮಾಡಿದ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ
- ಕೃಷ್ಣಾ ಮೇಲ್ದಂಡೆ ಮುಳವಾಡ ಏತನೀರಾವರಿ ಯೋಜನೆ ಹಂತ-೩; ೨೩೫ ಕೋಟಿ ರೂಪಾಯಿ ವೆಚ್ಚದ ಟೆಂಡರ್ ಪ್ರಕ್ರಿಯೆ ಪೂರ್ಣ- ಸಚಿವ ಎಂ.ಬಿ.ಪಾಟೀಲ್
- ಮಹದಾಯಿ ಯೋಜನೆ ವಿಚಾರ; ಪ್ರತಿಕ್ರಿಯಿಸಲು ನಿರಾಕರಿಸಿದ ಗೋವಾ ಮುಖ್ಯಮಂತ್ರಿ ಪ್ರಮೋದ್ ಸಾವಂತ್

****************

ನಾಳೆಯಿಂದ ರಾಜ್ಯದ ಜನತೆಗೆ ನಂದಿನಿ ಹಾಲು, ಮೊಸರು ಹಾಗೂ ವಿದ್ಯುತ್ ದರ ದುಬಾರಿಯಾಗಲಿದೆ.

ನಂದಿನಿ ಹಾಲು ಮತ್ತು ಮೊಸರಿನ ಪ್ರತಿ ಲೀಟರ್ ದರವನ್ನು ೪ ರೂಪಾಯಿಗೆ ಹೆಚ್ಚಿಸಿರುವ ಸರ್ಕಾರ ಈ ಹಣವನ್ನು ರೈತರಿಗೆ ನೀಡಲು ನಿರ್ಧರಿಸಿದೆ.

ಇಂಧನ ಇಲಾಖೆ ನೌಕರರ ಪಿಂಚಣಿ ಮತ್ತು ಗ್ರಾಜ್ಯೂಟಿ ನೀಡಲು ಪ್ರತಿ ಯೂನಿಟ್‌ಗೆ ೩೬ ಪೈಸೆ ಹೆಚ್ಚಳ ಮಾಡಿದೆ. ವಿದ್ಯುತ್ ದರ ೩೧ ಪೈಸೆ ಹೆಚ್ಚಳ ಮಾಡಿರುವುದರಿಂದ ಮಾಸಿಕ ಶುಲ್ಕ ೨೦ ರೂಪಾಯಿಗೆ ಹೆಚ್ಚಳವಾಗಲಿದ್ದು, ಇದರಿಂದಾಗಿ ೧೨೦ ರೂ. ಇದ್ದ ನಿಗದಿತ ಶುಲ್ಕ ೧೪೦ ರೂಪಾಯಿಗಳಿಗೆ ಹೆಚ್ಚಳವಾಗಲಿದೆ.

ನಾಳೆಯಿಂದಲೇ ಆರ್ಥಿಕ ವರ್ಷ ಪ್ರಾರಂಭವಾಗಲಿದ್ದು ಗ್ರಾಹಕರು ಹೆಚ್ಚಿನ ಹಣ ತೆರಬೇಕಾಗಿದೆ.

ಇದರ ಜೊತೆಗೆ ನಾಳೆಯಿಂದ ಬೆಂಗಳೂರಿನ ಜನತೆ ತಮ್ಮ ಮನೆಯ ತ್ಯಾಜ್ಯಕ್ಕೂ ತೆರಿಗೆ ಕಟ್ಟಬೇಕಾಗಿದೆ.

ನಾಳೆಯಿಂದ ಬೆಂಗಳೂರಿನಲ್ಲಿ ಕಸಕ್ಕೆ ೬೦೦ ಚದರಡಿಗೆ ೧೦ ರೂಪಾಯಿ, ೬೦೧ ರಿಂದ ೧ ಸಾವಿರ ಚದರಡಿಗೆ ೫೦ ರೂಪಾಯಿ, ೧ ಸಾವಿರದ ಒಂದರಿಂದ ೨ ಸಾವಿರ ಚದರಡಿಗೆ ೧೦೦ ರೂಪಾಯಿ, ೨ ಸಾವಿರದ ಒಂದರಿಂದ ೩ ಸಾವಿರ ಚದರಡಿಗೆ ೧೫೦ ರೂಪಾಯಿ, ೩ ಸಾವಿರದ ಒಂದರಿಂದ ೪ ಸಾವಿರ

ಚದರಡಿಗೆ ೨೦೦ ರೂಪಾಯಿ ಹಾಗೂ ೪ ಸಾವಿರ ಚದರಡಿ ಮೇಲ್ಪಟ್ಟು ೪೦೦ ರೂಪಾಯಿ ತೆರಿಗೆ ವಿಧಿಸಲಾಗಿದೆ.

****************

ಹಾಲು, ಬಸ್ ಪ್ರಯಾಣ ದರ ಸೇರಿದಂತೆ ಅಗತ್ಯ ವಸ್ತುಗಳ ಬೆಲೆ ಏರಿಕೆ ವಿರೋಧಿಸಿ ರಾಜ್ಯ ಸರ್ಕಾರದ ವಿರುದ್ಧ ಏಪ್ರಿಲ್ ೨ರಂದು ಬಿಜೆಪಿ ಹಮ್ಮಿಕೊಂಡಿರುವ ಅಹೋರಾತ್ರಿ ಧರಣಿಯ ಭಿತ್ತಿಪತ್ರವನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಬೆಂಗಳೂರಿನಲ್ಲಿಂದು ಬಿಡುಗಡೆ ಮಾಡಿದರು.

ಬಳಿಕ ಮಾತನಾಡಿದ ಅವರು ಏಪ್ರಿಲ್ ೨ರಂದು ರಾಜ್ಯ ಸರ್ಕಾರದ ಬೆಲೆ ಏರಿಕೆ ವಿರುದ್ಧ ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ಅಹೋರಾತ್ರಿ ಧರಣಿ ಹಮ್ಮಿಕೊಳ್ಳಲಾಗಿದ್ದು, ಪಕ್ಷದ ಶಾಸಕರು, ವಿಧಾನಪರಿಷತ್ ಸದಸ್ಯರು, ಜಿಲ್ಲಾಧ್ಯಕ್ಷರು, ರಾಜ್ಯ ಪದಾಧಿಕಾರಿಗಳು ಭಾಗಿಯಾಗಲಿದ್ದಾರೆ. ಅಹೋರಾತ್ರಿ ಧರಣಿಯನ್ನು ಯಾವ ಹಂತಕ್ಕೆ ಕೊಂಡೊಯ್ಯಬೇಕು ಎನ್ನುವುದನ್ನು ಅಂದೇ ನಿರ್ಧರಿಸಲಾಗುವುದು ಎಂದು ತಿಳಿಸಿದರು.

ಏಪ್ರಿಲ್ ೫ರಂದು ಜಿಲ್ಲಾ, ತಾಲೂಕು ಹಾಗೂ ಮಂಡಲಗಳಲ್ಲಿ ರಾಜ್ಯಾದ್ಯಂತ ಬೆಲೆ ಏರಿಕೆ ವಿರೋಧಿಸಿ ಹೋರಾಟ ಹಮ್ಮಿಕೊಳ್ಳಲಾಗಿದ್ದು, ರಾಜ್ಯ ಸರ್ಕಾರದ ಜನ ವಿರೋಧಿ ನಿಲುವಿನ ವಿರುದ್ಧ ಹೋರಾಟ ನಡೆಯಲಿದೆ. ಇದರ ಜೊತೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿರುವ ರಾಜ್ಯ ಮುಂಗಡ ಪತ್ರದಲ್ಲಿ ಸರ್ಕಾರಿ ಗುತ್ತಿಗೆಯಲ್ಲಿ ಅಲ್ಪ ಸಂಖ್ಯಾತರಿಗೆ ಶೇಕಡ ೪ರಷ್ಟು ಮೀಸಲಾತಿ ನೀಡಿರುವುದನ್ನು ವಿರೋಧಿಸಿ ಹೋರಾಟ ನಡೆಯಲಿದೆ ಎಂದು ವಿಜಯೇಂದ್ರ ತಿಳಿಸಿದ್ದಾರೆ.

****************

“ಜಲ, ವೃಕ್ಷ, ಶಿಕ್ಷಣ” ಎಂಬ ಧ್ಯೇಯ ವಾಕ್ಯದೊಂದಿಗೆ ನೀರಾವರಿ ಕಾರ್ಯಗಳು ಪ್ರಗತಿಯಲ್ಲಿದ್ದು, ಕೃಷ್ಣಾ ಮೇಲ್ದಂಡೆ ಮುಳವಾಡ ಏತನೀರಾವರಿ ಯೋಜನೆ ಹಂತ-೩ರ ಅಡಿಯಲ್ಲಿನ ಬಬಲೇಶ್ವರ ಶಾಖಾ ಕಾಲುವೆಯ ೫ಎ, ೫ಬಿ ಲಿಫ್ಟ್ ಕಾಮಗಾರಿಗಳಿಗೆ ೧೨೭ ಕೋಟಿ ಹಾಗೂ ೧೫ನೇ ವಿತರಣಾ ಮತ್ತು ಲ್ಯಾಟರಲ್ ಕಾಲುವೆಗಳಿಗೆ ೧೦೮ ಕೋಟಿ ಸೇರಿದಂತೆ ಒಟ್ಟು ೨೩೫ ಕೋಟಿ ವೆಚ್ಚದ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ.

ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಈ ಯೋಜನೆಯಿಂದ ಬಬಲೇಶ್ವರ ತಾಲೂಕಿನ ನಿಡೋಣಿ, ನಾಗರಾಳ, ತಿಗಣಿಬಿದರಿ, ಕಾಖಂಡಕಿ, ಶೇಗುಣಶಿ, ಸಂಗಾಪುರ ಮೊದಲಾದ ಎತ್ತರ ಪ್ರದೇಶಗಳ ೨೬ ಸಾವಿರ ಎಕರೆ ಭೂಮಿಗೆ ನೀರಾವರಿ ಸೌಲಭ್ಯ ದೊರೆಯಲಿದೆ. ನೀರಾವರಿ ಕ್ರಾಂತಿ

ನಿರಂತರವಾಗಿದ್ದು, ಈ ಯೋಜನೆ ಅನುಷ್ಠಾನದ ಪರಿಣಾಮ, ರೈತರು ಅತ್ಯಧಿಕ ಬೆಳೆ ಬೆಳೆದು ತಮ್ಮ ಆದಾಯ ಹೆಚ್ಚಳ ಮಾಡಿಕೊಳ್ಳಲು ಸಾಧ್ಯವಾಗುತ್ತದೆ ಎಂದು ಹೇಳಿದ್ದಾರೆ.

****************

ತುಮಕೂರಿನ ಸಿದ್ಧಗಂಗಾ ಮಠದಲ್ಲಿ ನಾಳೆ ತ್ರಿವಿಧ ದಾಸೋಹಿ ಡಾ.ಶಿವಕುಮಾರ ಮಹಾಯೋಗಿಯವರ ೧೧೮ ಜಯಂತಿ ಹಾಗೂ ಗುರುವಂದನಾ ಮಹೋತ್ಸವ ಕಾರ್ಯಕ್ರಮ ನಡೆಯಲಿದೆ.

ಈ ಹಿನ್ನೆಲೆ ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಇಂದು ರಾಜ್ಯಕ್ಕೆ ಆಗಮಿಸಲಿದ್ದು, ಡಾ.ಶಿವಕುಮಾರ ಮಹಾಯೋಗಿಯವರ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

****************

ವಿಜಯಪುರ ಜಿಲ್ಲೆಯ ನೆರೆಯ ಜಿಲ್ಲೆ ಹಾಗೂ ರಾಜ್ಯಗಳಿಗೆ ಸಂಪರ್ಕಿಸುವ ರಸ್ತೆಗಳಲ್ಲಿ ಭಾರೀ ವಾಹನಗಳು ಸಂಚರಿಸುತ್ತಿರುವದರಿಂದ ದಟ್ಟಣೆ ಉಂಟಾಗಿದ್ದು, ಇದನ್ನು ತಪ್ಪಿಸಲು ಪೆರಿಪೆರಲ್ ರಿಂಗ್ ರಸ್ತೆ ನಿರ್ಮಿಸುವ ಯೋಜನೆಗೆ ಕೇಂದ್ರ ಸಚಿವ ನಿತಿನ್ ಗಡ್ಕರಿ ಸಕಾರಾತ್ಮಕವಾಗಿ ಸ್ಪಂದಿಸಿ, ಇದನ್ನು ಪರಿಗಣಿಸುವ ಭರವಸೆ ನೀಡಿದ್ದಾರೆ ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ಮೂಲಕ ತಿಳಿಸಿರುವ ಅವರು, ವಿಜಯಪುರ ಜಿಲ್ಲೆ, ನೆರೆಯ ಬೆಳಗಾವಿ, ಕಲಬುರಗಿ; ಮಹಾರಾಷ್ಟ್ರದ ಕೊಲ್ಲಾಪುರ, ಸೊಲ್ಲಾಪುರ, ಗೋವಾ ಮತ್ತು ಇತರ ಪ್ರಮುಖ ನಗರಗಳ ಸಂಪರ್ಕ ಸೇತುವೆ ಆಗಿದ್ದು, ಈ ಕಾರಣದಿಂದ ಭಾರೀ ವಾಹನಗಳ ಸಂಚಾರ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ಸಂಚಾರ ದಟ್ಟಣೆ ನಿವಾರಿಸಲು ಮತ್ತು ನಗರಾಭಿವೃದ್ಧಿಗೆ ಬಲ ನೀಡಲು ಪೆರಿಫೆರಲ್ ರಿಂಗ್ ರಸ್ತೆ ಅನಿವಾರ್ಯವಾಗಿದೆ. ಈ ಅಗತ್ಯವನ್ನು ಮನಗಂಡು, ಜನವರಿ ೨೦೨೫ರಲ್ಲಿ ಕೇಂದ್ರ ಸಾರಿಗೆ ಸಚಿವರಿಗೆ ಪತ್ರದ ಮೂಲಕ ತಿಳಿಸಲಾಗಿತ್ತು. ಇದಕ್ಕೆ ಅವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದು ತಿಳಿಸಿದ್ದಾರೆ.

ಯೋಜಿತ ಪೆರಿಫೆರಲ್ ರಿಂಗ್ ರಸ್ತೆ ಹಲವು ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳನ್ನು ಪರಸ್ಪರ ಸಂಪರ್ಕಿಸಲಿವೆ. ಜಿಲ್ಲೆಯ ಆರ್ಥಿಕ ಅಭಿವೃದ್ಧಿಗೆ ಪೆರಿಪೆರಲ್ ರಿಂಗ್ ರಸ್ತೆ ಯೋಜನೆಯು ಹೊಸ ಹೆಜ್ಜೆಯಾಗಲಿದೆ ಎಂದು ಸಚಿವರು ತಿಳಿಸಿದ್ದಾರೆ.

****************

ಮಹದಾಯಿ ನದಿ ಯೋಜನೆಯ ವಿಚಾರ ಈಗಾಗಲೇ ನ್ಯಾಯಾಲಯದಲ್ಲಿದೆ. ಈ ಬಗ್ಗೆ ಯಾವುದೇ ಪ್ರತಿಕ್ರಿಯೆ ನೀಡಲ್ಲ ಎಂದು ಗೋವಾ ಮುಖ್ಯಮಂತ್ರಿ ಪ್ರಮೋದ್ ಸಾವಂತ್ ಹೇಳಿದ್ದಾರೆ.

ಹುಬ್ಬಳ್ಳಿಯ ವರೂರ್ ನ ಜೈನ ತೀರ್ಥಂಕರ ಮಹಾಮಸ್ತಾಭಿಷೇಕದ ಕೊನೆಯ ದಿನದ ಮಹಾಮಸ್ತಕಾಭಿಷೇಕ ಕಾರ್ಯಕ್ರಮದ ಸಮಾರೋಪ ಸಮಾರಂಭಕ್ಕೆ ಆಗಮಿಸಿದ್ದ ಅವರು, ಕಳಸಾ ಬಂಡೂರಿ ಮಹದಾಯಿ ಕಾಮಗಾರಿ ವಿಳಂಬ ವಿಚಾರದ ಕುರಿತು ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಲು ನಿರಾಕರಿಸಿದರು.

****************

ದೇಶಾದ್ಯಂತ ಇಂದು ಈದ್ ಉಲ್ ಫಿತರ್ - ರಂಜಾನ್ ಅನ್ನು ಆಚರಿಸಲಾಯಿತು. ಬೆಂಗಳೂರು ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ ಮುಸ್ಲಿಂ ಬಾಂಧವರು ಬೆಳಗ್ಗೆಯಿಂದಲೇ ಮಸೀದಿಗಳಿಗೆ ತೆರಳಿ ಸಾಮೂಹಿಕ ಪ್ರಾರ್ಥನೆಯಲ್ಲಿ ಪಾಲ್ಗೊಂಡರು.

೨೯ ದಿನಗಳ ಉಪವಾಸದ ನಂತರ ಭಾನುವಾರ ರಾತ್ರಿ ಚಂದ್ರದರ್ಶನವಾದ ಕಾರಣ ನಿಯಮದಂತೆ ಇಂದು ಬೆಳಗ್ಗೆ ರಂಜಾನ್ ಹಬ್ಬದ ವಿಶೇಷ ಪ್ರಾರ್ಥನೆ ಸಲ್ಲಿಸಲು ಇಸ್ಲಾಂ ಧರ್ಮಗುರುಗಳು ನಿರ್ಧರಿಸಿದ್ದು, ಉಪವಾಸವನ್ನು ಅಂತ್ಯಗೊಳಿಸಲಾಯಿತು.

ರಂಜಾನ್ ಅಂಗವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಮುಸ್ಲಿಂ ಬಾಂಧವರಿಗೆ ಶುಭಾಶಯ ಕೋರಿದ್ದಾರೆ.

ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ದ್ವೇಷಾಸೂಯೆಗಳನ್ನು ಸುಟ್ಟು ಪ್ರೀತಿ, ಬಾಂಧವ್ಯಗಳನ್ನು ಬೆಸೆಯುವ ಪವಿತ್ರ ಈದ್ - ಉಲ್ - ಫಿತರ್ ಹಬ್ಬದ ಸಂದೇಶ ಮನುಕುಲದ ಹಾದಿಗೆ ದಾರಿದೀಪವಾಗಲಿ, ನಾಡಲ್ಲಿ ಸುಖ, ಶಾಂತಿ, ಸಮೃದ್ಧಿ ನೆಲೆಸಲಿ ಎಂದು ಹಾರೈಸಿದ್ದಾರೆ.

ಹಿಂದೂ ಮುಸ್ಲಿಂ ಬಾಂಧವರಿಗೆ ಹಬ್ಬಗಳು ಉತ್ತಮ ಬಾಂಧವ್ಯವನ್ನು ಬೆಸೆಯುವಂತಾಗಲಿ ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರ ಸಚಿವ ಕೆಹೆಚ್. ಮುನಿಯಪ್ಪ ಹೇಳಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯ ಈದ್ಗಾ ಮೈದಾನ ಕ್ಕೆ ಬೇಟಿ ನೀಡಿ ರಂಜಾನ್ ಆಚರಣೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಹಬ್ಬಗಳು ಸಮಾಜದಲ್ಲಿ ಭಾವೈಕ್ಯತೆ ಮೂಡಿಸಲು ನೆರವಾಗಲಿದ್ದು ರಂಜಾನ್ ಹಬ್ಬ, ಹಿಂದೂ ಮುಸ್ಲಿಂ ಬಾಂಧವರಿಗೆ ಉತ್ತಮ ಬಾಂಧವ್ಯವನ್ನು ಬೆಸೆಯಲು ಪೂರಕವಾಗಲಿದೆ ಎಂದರು.

ದಾವಣಗೆರೆ ಜಿಲ್ಲಾದ್ಯಂತ ರಂಜಾನ್ ಹಬ್ಬವನ್ನು ಸಡಗರದಿಂದ ಆಚರಿಸಲಾಯಿತು. ಮುಸ್ಲಿಂ ಬಾಂಧವರು, ನಗರದ ಈದ್ಗಾ ಮೈದಾನದಲ್ಲಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿ ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡರು.

ಮುಸಲ್ಮಾನರ ಪವಿತ್ರ ಹಬ್ಬ ರಂಜಾನ್ ಹಬ್ಬವನ್ನು ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ ಮುಸ್ಲಿಂ ಬಾಂಧವರು ಇಂದು ಅತ್ಯಂತ ಶ್ರದ್ಧಾಭಕ್ತಿಯಿಂದ ಹಬ್ಬದ ಮೆರವಣಿಗೆಯ ಮೂಲಕ ಸಡಗರ ಸಂಭ್ರಮಗಳಿಂದ ಆಚರಿಸಿದರು. ಹಬ್ಬದ ಮೆರವಣಿಗೆ ಶಾಂತಿಯುತವಾಗಿ ಸಾಗಿತು. ಮುಂಜಾಗ್ರತಾ ಕ್ರಮವಾಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿತ್ತು.

ಚಿಕ್ಕಮಗಳೂರು ಜಿಲ್ಲೆಯಾದ್ಯಂತ ಮುಸ್ಲಿಂ ಬಾಂದವರು ರಂಜಾನ್ ಹಬ್ಬವನ್ನು ಸಂಭ್ರಮದಿಂದ ಆಚರಿಸಿದರು. ಹಬ್ಬದ ಪ್ರಯುಕ್ತ ಚಿಕ್ಕಮಗಳೂರು ನಗರದ ಕೆಂಪನಹಳ್ಳಿ ಈದ್ಗಾ ಮೈಧಾನದಲ್ಲಿ ಸಾವಿರಾರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದ ಜೊತೆಗೆ ಹಲವೆಡೆ ಹೊಸ ಬಟ್ಟೆ ತೊಟ್ಟು ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಳ್ಳುತಿದ್ದ ದೃಶ್ಯಗಳು ಸಾಮಾನ್ಯವಾಗಿತ್ತು.

ದಖನಿ ಇದಗಾ ಮೈದಾನದಲ್ಲಿ ಸಚಿವ ಏನ್.ಎಸ್.ಬೋಸ್ ರಾಜು, ಸಂಸದ ಕುಮಾರನಾಯ್ಕ್ ಸಾಮೂಹಿಕ ಪ್ರಾರ್ಥನೆಯಲ್ಲಿ ಭಾಗವಹಿಸಿದರು.

ವಿಜಯನಗರ ಜಿಲ್ಲಾಧ್ಯಂತ ಇಂದು ಸಡಗರ ಮತ್ತು ಸಂಭ್ರಮದಿಂದ ಮುಸ್ಲಿಂ ಬಾಂಧವರು ಈದ್ ಉಲ್ ಫಿತರನ್ನು ಆಚರಿಸಿದರು.

ನಗರದ ಅಂಬೇಡ್ಕರ್ ವೃತ್ತದಲ್ಲಿರುವ ಈದ್ಗಾ ಮೈದಾನಕ್ಕೆ ಶಾಸಕ ಹೆಚ್.ಆರ್. ಗವಿಯಪ್ಪ ಅವರು ಆಗಮಿಸಿ ಮುಸ್ಲಿಂ ಬಾಂಧವರ ಜೊತೆ ಪ್ರಾರ್ಥನೆ ಸಲ್ಲಿಸಿ ಶುಭಾಶಯ ಕೋರಿದರು.

ಕೋಲಾರದ ದರ್ಗಾ ಸಮೀಪ ಆಯೋಜಿಸಿದ್ದ ವಿಶೇಷ ಪ್ರಾರ್ಥನೆಯಲ್ಲಿ ಭಾಗವಹಿಸಿ ಮಾತನಾಡಿದ ಶಾಸಕ ಕೊತ್ತೂರು ಜಿ. ಮಂಜುನಾಥ್, ಈದ್ಗಾ ಮೈದಾನಕ್ಕೆ ಕಾಂಪೌಂಡ್, ಬೋರ್ ವೆಲ್, ಹೈಮಾಸ್ಕ್ ಲೈಟ್ ಸೇರಿದಂತೆ ಮೂಲಭೂತ ಸೌಕರ್ಯ ಕಲ್ಪಿಸಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯರಾದ ನಸೀರ್ ಅಹಮದ್, ಎಂ.ಎಲ್ ಅನಿಲ್ ಕುಮಾರ್, ಮಾಜಿ ಸಭಾಪತಿ ವಿ.ಆರ್.ಸುದರ್ಶನ್ ಮತ್ತಿತರರು ಉಪಸ್ಥಿತರಿದ್ದರು.

ರಾಯಚೂರು, ಧಾರವಾಡ ಹಾಗೂ ಬೆಳಗಾವಿಯಲ್ಲೂ ಮುಸ್ಲಿಂ ಬಾಂಧವರು ಸಾಮೂಹಿಕ ಪ್ರಾರ್ಥನೆ ನೆರವೇರಿಸಿದರು.

****************

ಉತ್ತರಕನ್ನಡ ಜಿಲ್ಲೆಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಮಹಿಳಾ ಕೆಲಸಗಾರರು ಭಾಗವಹಿಸುವಿಕೆ ಪ್ರಮಾಣವನ್ನು ಹೆಚ್ಚಿಸುವ ನಿಟ್ಟಿನಲ್ಲಿ ನಾಳೆಯಿಂದ ಜೂನ್ ೩೦ರ ವರೆಗೆ ಸ್ತ್ರೀ ಚೇತನ ಎಂಬ ವಿಶೇಷ ಅಭಿಯಾನ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಉತ್ತರಕನ್ನಡ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಈಶ್ವರ ಕಾಂದೂ ತಿಳಿಸಿದ್ದಾರೆ.

ಅಭಿಯಾನದ ಕುರಿತು ಮಾಹಿತಿ ನೀಡಿರುವ ಅವರು, ಈ ಅಭಿಯಾನದ ವೇಳೆ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತ್ ಮಟ್ಟದಲ್ಲಿ ಸ್ತ್ರೀ ಚೇತನ ಅಭಿಯಾನದಡಿ ಮಹಿಳಾ ಕೂಲಿ ಕಾರ್ಮಿಕರಿಗೆ ಸಮಾನ ಅವಕಾಶ, ಸಮಾನ ದಿನಗೂಲಿ, ನೇರ ನಗದು ವರ್ಗಾವಣೆ ವೇತನ ಪದ್ಧತಿ, ವೈಯಕ್ತಿಕ ಮತ್ತು ಸಮುದಾಯ ಸೌಲಭ್ಯಗಳು, ಗರ್ಭಿಣಿಯರು, ವಿಶೇಷಚೇತನರು ಮತ್ತು ಹಿರಿಯ ನಾಗರಿಗೆ ಕೆಲಸದಲ್ಲಿ ರಿಯಾಯತಿ, ಶಿಶುಗಳ ಆರೈಕೆಗಾಗಿ ಕೂಸಿನ ಮನೆ, ಜೀವ ವಿಮೆ ಸೇರಿದಂತೆ ಹಲವು ಲಾಭದಾಯಕ ಅಂಶಗಳ ಕುರಿತು ಜಾಗೃತಿ ಮೂಡಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.

ಸಂಜೀವಿನಿ ಒಕ್ಕೂಟ, ಮಹಿಳಾ ಸ್ವ ಸಹಾಯ ಗುಂಪುಗಳೊಂದಿಗೆ, ಕಾರ್ಮಿಕರೊಂದಿಗೆ ಸಭೆ, ಮಾಹಿತಿ ವಿನಿಮಯ ಕಾರ್ಯಕ್ರಮ, ಜಾಗೃತಿ ಜಾಥಾ ಸೇರಿದಂತೆ ಜನರಲ್ಲಿ ಅರಿವು ಮೂಡಿಸಲು ಅಭಿಯಾನ ನಡೆಸಲಾಗುವುದು ಎಂದು ಈಶ್ವರ್ ಕಾಂದೂ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

****************

ಮುಂದಿನ ಮೂರು ದಿನಗಳು ರಾಜ್ಯದ ಕೆಲವೆಡೆ ಗುಡುಗು-ಮಿಂಚು ಸಹಿತ ಮಳೆಯಾಗುವ ಸಾಧ್ಯತೆಯಿದೆ. ಏಪ್ರಿಲ್ ೩ ಹಾಗೂ ೪ ರಂದು ಕರಾವಳಿ ಹಾಗೂ ಉತ್ತರ ಮತ್ತು ದಕ್ಷಿಣ ಒಳನಾಡಿನ ಕೆಲವೆಡೆ ಹಗುರದಿಂದ ಸಾಧಾರಣ ಮಳೆಯಾಗುವ ಸಂಭವವಿದೆ.

ಆಕಾಶವಾಣಿಗೆ ಮಾಹಿತಿ ನೀಡಿರುವ ಬೆಂಗಳೂರು ಹವಾಮಾನ ಇಲಾಖೆಯ ನಿರ್ದೇಶಕ ಸಿ.ಎಸ್.ಪಾಟೀಲ್, ರಾಜ್ಯದ ಹಲವೆಡೆ ಗುಡುಗು-ಮಿಚು ಸಹಿತ ಮಳೆಯಾಗುವ ಸಾಧ್ಯತೆಯಿದ್ದು, ಉತ್ತರಕನ್ನಡ, ದಕ್ಷಿಣಕನ್ನಡ, ಉಡುಪಿ, ಬೆಳಗಾವಿ, ಧಾರವಾಡ, ಹಾವೇರಿ, ಗದಗ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಕೊಡಗು, ಮೈಸೂರು ಹಾಗೂ ಚಾಮರಾಜನಗರ ಜಿಲ್ಲೆಗಳ ಕೆಲವೆಡೆ ಭಾರೀ ಮಳೆಯಾಗುವ ಸಾಧ್ಯತೆಯಿದ್ದು, ಏಪ್ರಿಲ್ ೩ ಹಾಗೂ ೪ ರಂದು ಈ ಜಿಲ್ಲೆಗಳಿಗೆ ಎಲ್ಲೋ ಅಲರ್ಟ್ ಘೋಷಿಸಲಾಗಿದೆ. ಆ ದಿನಗಳಂದು ಕೆಲವೆಡೆ ಆಲಿಕಲ್ಲು ಮಳೆಯಾಗುವ ಸಂಭವವಿದೆ.

ರಾಜ್ಯಾದ್ಯಂತ ಏಪ್ರಿಲ್ ೨ ರಿಂದ ೫ ರವರೆಗೆ ಉಷ್ಣತೆ ಮೂರರಿಂದ ನಾಲ್ಕು ಡಿಗ್ರಿ ಸೆಲ್ಸಿಯಸ್ ಇಳಿಮುಖವಾಗುವ ಸಾಧ್ಯತೆಯಿದೆ ಎಂದು ಅವರು ತಿಳಿಸಿದ್ದಾರೆ.

********ಮುಕ್ತಾಯ*******